# ಹಿರಿಯ ಶ್ರೇಣಿಯ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ, ಕೂಡ್ಲಿಗಿ

# ಸಿ ಸಿ - 884/2022

ದಿನಾಂಕಃ 21.04.2026 ರಂದು ಸಾಕ್ಷಿದಾರರಿಗೆ, ಸತ್ಯ ಪ್ರತಿಜ್ಞೆ ಬೋಧಿಸಲಾಯಿತು.

| | | |
|---|---|---|
| ಹೆಸರು | : | ತಿಮ್ಮಣ್ಣ ಚಾಮನೂರು |
| ತಂದೆಯ ಹೆಸರು | : | ಶಿವಪ್ಪ |
| ವಯಸ್ಸು | : | 40 ವರ್ಷ |
| ಉದ್ಯೋಗ | : | ಪಿ.ಐ, ಸವಣೂರು ಪೊಲೀಸ್ ಠಾಣೆ |
| ವಾಸಸ್ಥಳ | : | ಸವಣೂರು |

## ಮುಖ್ಯ ವಿಚಾರಣೆ ಸ.ಸ.ಅ ರವರಿಂದಃ

ನಾನು ದಿಃ 01.04.2021 ರಿಂದ 22.08.2022 ರವರೆಗೆ ಹೊಸಹಳ್ಳಿ ಪೊಲೀಸ್ ಠಾಣೆಯಲ್ಲಿ ಪಿ.ಎಸ್.ಐ ಎಂದು ಕರ್ತವ್ಯ ನಿರ್ವಹಿಸಿರುತ್ತೇನೆ.

ದಿಃ 24.02.2022 ರಂದು ಎಂ.ಬಿ ಅಯ್ಯನಹಳ್ಳಿನ ಅಪಘಾತ ಸ್ಥಳಕ್ಕೆ ಹೋದಾಗ ಅಲ್ಲಿ ಚಾ.ಸಾ 1 ರವರು ನೀಡಿದ ಲಿಖಿತ ದೂರನ್ನು ಸ್ವೀಕರಿಸಿಕೊಂಡು ಬಂದು ಪ್ರಕರಣ ದಾಖಲಿಸಿ ಪ್ರ.ವ.ವ ಯನ್ನು ತಯಾರಿಸಿ ಮಾನ್ಯ ನ್ಯಾಯಾಲಯಕ್ಕೆ ಮತ್ತು ಮೇಲಾಧಿಕಾರಿಗೆ ಸಲ್ಲಿಸಿರುತ್ತೇನೆ.

ಅದೇ ದಿನ ಅಪಘಾತದಲ್ಲಿ ಮೃತಪಟ್ಟ ಎಸ್.ಎಂ ಶಿವಪ್ರಸಾದ ಸ್ವಾಮಿಯವರ ಶವ ಪಂಚನಾಮೆಯನ್ನು ಚಾ.ಸಾ 2 ಮತ್ತು 3 ರವರ ಸಮಕ್ಷಮ ಸಂಜೆ 4-00 ರಿಂದ 6-00 ಗಂಟೆಯವರೆಗೆ ಜರುಗಿಸಿರುತ್ತೇನೆ. ಆ ಕಾಲಕ್ಕೆ ಭಾವಚಿತ್ರಗಳನ್ನು ತೆಗೆಸಿರುತ್ತೇನೆ. ಚಾ.ಸಾ 4 ಮತ್ತು 5 ರವರ ಹೇಳಿಕೆಗಳನ್ನು ಪಡೆದಿರುತ್ತೇನೆ. ಆ ನಂತರ ಶವ ಪರೀಕ್ಷೆಗಾಗಿ ವೈದ್ಯಾಧಿಕಾರಿಗಳಿಗೆ ನಿವೇದಿಸಿಕೊಂಡಿರುತ್ತೇನೆ. ಶವ ಪರೀಕ್ಷೆ ಆದ ನಂತರ ಮೃತರ ವಾರಸುದಾರರಿಗೆ ಶವವನ್ನು ಹಸ್ತಾಂತರಿಸಿರುತ್ತೇನೆ.

ಸದರಿ ದೂರನ್ನು ಈಗಾಗಲೆ ನಿ.ಪಿ 1 ಎಂದು ಗುರುತಿಸಿದ್ದು, ಅದರಲ್ಲಿರುವ ನನ್ನ ಸಹಿಯನ್ನು ನಿ.ಪಿ 1-ಬಿ ಎಂದು ಗುರುತಿಸಲಾಯಿತು. ಸದರಿ ಪ್ರ,ವ.ವ ಯನ್ನು ನೋಡಿ ಗುರುತಿಸಿದ್ದು ಅದನ್ನು ನಿ.ಪಿ 11 ಎಂದು ಗುರುತಿಸಲಾಯಿತು. ಸದರಿ ಶವ

ಪಂಚನಾಮೆಯನ್ನು ಈಗಾಗಲೆ ನಿ.ಪಿ 4 ಎಂದು ಗುರುತಿಸಿದ್ದು, ಅದರಲ್ಲಿರುವ ನನ್ನ ಸಹಿಯನ್ನು ನಿ.ಪಿ 4-ಎ ಎಂದು ಗುರುತಿಸಲಾಯಿತು.

ಮುಂದಿನ ತನಿಖೆಗಾಗಿ ಈ ಪ್ರಕರಣದ ಕಡತವನ್ನು ಚಾ.ಸಾ 20 ರವರಿಗೆ ಹಸ್ತಾಂತರಿಸಿರುತ್ತೇನೆ.

**<u>ಪಾಟೀ ಸವಾಲು ಆರೋಪಿ ಪರ ವಕೀಲರಿಂದಃ</u>**

ಆರೋಪಿಯ ಯಾವುದೇ ತಪ್ಪು ಇಲ್ಲದೆ ಇದ್ದರು ಸಹ ಆರೋಪಿ ವಿರುದ್ಧ ಸುಳ್ಳು ಪ್ರಕರಣ ದಾಖಲಿಸಿರುತ್ತೇನೆ ಎಂದರೆ ಸರಿಯಲ್ಲ. ಯಾವುದೇ ಶವ ಪಂಚನಾಮೆ ಜರುಗಿಸಿಲ್ಲ ಎಂದರೆ ಸರಿಯಲ್ಲ.

ಅ

ಸಾಕ್ಷಿದಾರರ ಹೇಳಿಕೆಗಳನ್ನು ಈ ಪ್ರಕರಣಕ್ಕೆ ಅನುಕೂಲವಾಗುವಂತೆ ಠಾಣೆಯಲ್ಲಿ ಸೃಷ್ಠಿಸಿರುತ್ತೇನೆ ಎಂದರೆ ಸರಿಯಲ್ಲ.

ಆರೋಪಿ ಯಾವುದೇ ತಪ್ಪನ್ನು ಮಾಡದೆ ಇದ್ದರು ಆರೋಪಿ ವಿರುದ್ಧ ಸುಳ್ಳು ದೋಷರೋಪಣೆ ಪತ್ರ ಸಲ್ಲಿಸಿ ಸುಳ್ಳು ಸಾಕ್ಷ್ಯವನ್ನು ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

ಮರುವಿಚಾರಣೆಃ ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಲಾಗಿದೆ.)

**ಓ,ಹೇ,ಕೇ,ಸರಿ ಇದೆ,**

**ಹಿ.ಸಿ.ಜೆ ಮತ್ತು ಜೆ.ಎಂ.ಎಫ್.ಸಿ**
**ಕೂಡ್ಲಿಗಿ.**